ಆಹಾರ ಇಲಾಖೆಯಿಂದ ಹೊಸ ಯೋಜನೆಗಳ ಅನುಷ್ಠಾನ

1223 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09 ಮತ್ತು 2009–2010ನೇ ಸಾಲಿನಲ್ಲಿ ಆಹಾರ ಮತ್ತು ನಾಗರೀಕ ಪೂರೈಕೆ ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯಿಂದ ಕೇಂದ್ರ ಯೋಜನೆಗಳೂ ಸೇರಿದಂತೆ ಯಾವ ಯಾವ ಹೊಸ ಯೋಜನೆಗಳನ್ನು ಪ್ರಕಟಿಸಲಾಗಿದೆ, ಇದಕ್ಕೆ ನಿಗದಿಪಡಿಸಲಾದ ಅನುದಾನವೆಷ್ಟು;

ಆ) ಈ ಯೋಜನೆಗಳ ಪೈಕಿ ಎಷ್ಟು ಯೋಜನೆಗಳನ್ನು ಇಲ್ಲಿಯವರೆಗೆ ಅನುಷ್ಠಾನಗೊಂಡಿವೆ, ಇದಕ್ಕಾಗಿ 30–6–2009ರ ಅಂತ್ಯಕ್ಕೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ, ವೆಚ್ಚವಾದ ಹಣವೆಷ್ಟು (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

ಇ) ಮೇಲ್ಕಂಡ ಯೋಜನೆಗಳ ಪೈಕಿ ಎಷ್ಟು ಯೋಜನೆಗಳನ್ನು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕಾರ್ಯಗತಗೊಳಿಸಲಾಗುತ್ತಿದೆ; ಇದಕ್ಕಾಗಿ ಕೇಂದ್ರದಿಂದ ರಾಜ್ಯಕ್ಕೆ ಬಂದಿರುವ ಹಣವೆಷ್ಟು;

ಈ) ಈ ಯೋಜನೆಗಳ ಸಮರ್ಪಕ ಅನುಷ್ಠಾನದ ಬಗ್ಗೆ ಸರ್ಕಾರ ಇಲ್ಲಿಯವರೆವಿಗೆ ಎಷ್ಟು ಬಾರಿ ಪರಾಮರ್ಶೆ ಸಭೆಗಳನ್ನು ನಡೆಸಿದೆ.

ಉ) ಈ ಯೋಜನೆಗಳ ಅನುಷ್ಠಾನದಲ್ಲಿ ಯಾವ ಯಾವ ಪ್ರದೇಶಗಳಲ್ಲಿ ದೂರುಗಳು/ಭ್ರಷ್ಟಾಚಾರದ ಪ್ರಕರಣಗಳು ಪತ್ತೆಯಾಗಿವೆ; (ಜಿಲ್ಲಾವಾರು ವಿವರ ಒದಗಿಸುವುದು)

ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು)

ಅ) 2008–09ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 3456–00–104–0–01 (ಯೋಜನೆ) ಶಾಲೆಗಳಲ್ಲಿ ಗ್ರಾಹಕರ ಕ್ಲಬ್‌ಗಳ ಸ್ಥಾಪನೆ ಮತ್ತು 3456–00–104–0–02 (ಯೋಜನೆ) ಗ್ರಾಹಕರ ಕಲ್ಯಾಣ ಚಟುವಟಿಕೆಗಳಡಿ ಈ ಕೆಳಕಂಡಂತೆ ಅನುದಾನ ಮಂಜೂರಾಗಿರುತ್ತದೆ.

ಲೆಕ್ಕ ಶೀರ್ಷಿಕೆ	ಮಂಜೂರಾದ ಅನುದಾನ (ರೂ. ಲಕ್ಷಗಳಲ್ಲಿ)	ಷರಾ
3456–00–104–0–01	2008–09 50.00 +15.00 2009–10 50.00	ಶಾಲೆಗಳಲ್ಲಿ 2008–09ನೇ ಸಾಲಿನಲ್ಲಿ ರಾಜ್ಯದ 650 ಶಾಲೆಗಳಲ್ಲಿ ತಲಾ ರೂ.10,000.00 ಗಳಂತೆ ಶಾಲಾ ಗ್ರಾಹಕರ ಕ್ಲಬ್‌ಗಳನ್ನು ಸ್ಥಾಪಿಸಿದ್ದು, ಈ ಬಗ್ಗೆ ಇದುವರೆಗೆ ರೂ.65.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಯೋಜನೆಯ ಉದ್ದೇಶವೇನೆಂದರೆ ಶಾಲೆಗಳಲ್ಲಿ ವಿದ್ಯಾರ್ಥಿಗಳ ಮಟ್ಟದಲ್ಲಿ ಗ್ರಾಹಕ ಜಾಗೃತಿ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವಾಗಿದ್ದು, ಈ ಬಗ್ಗೆ 14 ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ. 2009–10ನೇ ಸಾಲಿನಲ್ಲಿ ಕ್ರಿಯಾ ಯೋಜನೆ ಮಂಜೂರಾಗದ ಕಾರಣ ಈ ಬಗ್ಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.
3456–00–104–0–02	2008–09 100.00 –15.00 2009–10 100.00	2008–09ನೇ ಸಾಲಿನಲ್ಲಿ ಸಾರ್ವಜನಿಕರಲ್ಲಿ ಗ್ರಾಹಕರ ಜಾಗೃತಿ ಬಗ್ಗೆ ಅರಿವು ಮೂಡಿಸುವ ನಾನಾ ವಿದಧ ಗ್ರಾಹಕ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿ ಕೊಳ್ಳಲಾಗಿರುತ್ತದೆ. ಈ ಬಗ್ಗೆ ರೂ. 49.00 ಲಕ್ಷಗಳನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. ರೂ. 30,02,020.00 ಗಳನ್ನು ವೆಚ್ಚ ಮಾಡ ಲಾಗಿರುತ್ತದೆ. ಜೊತೆಗೆ ಎಲ್ಲಾ ಜಿಲ್ಲೆಗಳು ಸೇರಿದಂತೆ, ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ವಿಶ್ವ ಗ್ರಾಹಕರ

		ಹಕ್ಕುಗಳ ದಿನಾಚರಣೆಗಾಗಿ ವೆಚ್ಚ ಭರಿಸಲಾಗಿರುತ್ತದೆ. 2009–10ನೇ ಸಾಲಿನಲ್ಲಿ ಕ್ರಿಯಾ ಯೋಜನೆ ಮಂಜೂರಾಗದ ಕಾರಣ ಈ ಬಗ್ಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. *ಲೆಕ್ಕ ಶೀರ್ಷಿಕೆ 3456–00–104–0–02 ಯಿಂದ ಲೆಕ್ಕ ಶೀರ್ಷಿಕೆ 3456–00–104–0–01ಗೆ ರೂ. 15.00 ಲಕ್ಷಗಳನ್ನು ಪುನರ್ ವಿನಿಯೋಗ ಮಾಡಿ ಕೊಳ್ಳಲಾಗಿದೆ

ಆ) ಕಂಡಿಕೆ (ಅ) ರಲ್ಲಿ ತಿಳಿಸಿರುವ ಯೋಜನೆಯನ್ನು ಹೊರತುಪಡಿಸಿ ಮತ್ತಾವುದೇ ಯೋಜನೆಗಳು ಇರುವುದಿಲ್ಲ. 2009–10ನೇ ಸಾಲಿನ ಕ್ರಿಯಾ ಯೋಜನೆಯ ಅನುಮೋದನೆಯಾಗಿಲ್ಲದ ಕಾರಣ 2009–10ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಇ) ಲೆಕ್ಕ ಶೀರ್ಷಿಕೆ 3456–00–104–0–01 (ಯೋಜನೆ) ಶಾಲೆಗಳಲ್ಲಿ ಗ್ರಾಹಕರ ಕ್ಲಬ್‌ಗಳ ಸ್ಥಾಪನೆ ಕುರಿತು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕಾರ್ಯಗತಗೊಳಿಸಲಾಗುತ್ತಿದೆ. ಇದಕ್ಕಾಗಿ 2008–09ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ರೂ. 65.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ ಹಾಗೂ 2009–10ನೇ ಸಾಲಿನಲ್ಲಿ ರೂ. 50.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.

ಈ) ಪ್ರತಿ ಮಾಹೆ ಎಂ.ಎಂ.ಆರ್. ಸಭೆಯಲ್ಲಿ ಈ ಕುರಿತು ಚರ್ಚೆ ಮಾಡಲಾಗುತ್ತದೆ.

ಉ) ಯಾವುದೂ ಇರುವುದಿಲ್ಲ.

1228 ಶ್ರೀ ಗೋಪಾಲ ಭಂಡಾರಿ ಹೆಚ್. ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾರಂಭಿಸಲಾಗುವ ಹೊಸ ಅಂಗನವಾಡಿ ಕೇಂದ್ರಗಳೆಷ್ಟು;

ಆ) ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟೆಷ್ಟು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು;